# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 572 |
| ಸದಸ್ಯರ ಹೆಸರು : | ಶ್ರೀ ಟಿ. ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ : | 13.12.2024 |
| ಉತ್ತರಿಸುವ ಸಚಿವರು : | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ರಾಜ್ಯಾದ್ಯಂತ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಎಷ್ಟು ಹಾಸ್ಟೆಲ್‌ಗಳಿವೆ (ಮಾಹಿತಿ ಒದಗಿಸುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ರಾಜ್ಯಾದ್ಯಂತ 1277 ಮೆಟ್ರಿಕ್ ಪೂರ್ವ ಹಾಗೂ 1320 ಮೆಟ್ರಿಕ್ ನಂತರದ ಹೀಗೆ ಒಟ್ಟು 2597 ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿರುತ್ತವೆ. ವಿದ್ಯಾರ್ಥಿನಿಲಯವಾರು ಮಾಹಿತಿಯನ್ನು ಇಲಾಖಾ ಜಾಲತಾಣ http://bcw.karnataka.gov.in/info-4/LA-LC-Answer /en ರಲ್ಲಿ ನೀಡಲಾಗಿದೆ. |
| ಆ) | ಎಷ್ಟು ಹಾಸ್ಟೆಲ್‌ಗಳಿಗೆ ಸ್ವಂತ ಕಟ್ಟಡಗಳಿವೆ: ಸ್ವಂತ ಕಟ್ಟಡಗಳಿಲ್ಲದ ಎಷ್ಟು ಹಾಸ್ಟೆಲ್‌ಗಳಿಗೆ ಸರ್ಕಾರದಿಂದ ಬಾಡಿಗೆ ಪಾವತಿ ಆಧಾರದ ಮೇಲೆ ತೆಗೆದುಕೊಳ್ಳಲಾಗಿದೆ; ಇವುಗಳಿಗೆ ವಾರ್ಷಿಕವಾಗಿ ಪಾವತಿಸಲಾಗುತ್ತಿರುವ ಬಾಡಿಗೆಯ ಒಟ್ಟು ಮೊತ್ತವೆಷ್ಟು; (ವಿವರ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 2597 ವಿದ್ಯಾರ್ಥಿ ನಿಲಯಗಳ ಪೈಕಿ 1641 ಸ್ವಂತ ಕಟ್ಟಡದಲ್ಲಿ, 232 ಉಚಿತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, 724 ಕಟ್ಟಡಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ.<br><br>ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಮಾಸಿಕ ಹಾಗೂ ವಾರ್ಷಿಕವಾಗಿ ಪಾವತಿಸುತ್ತಿರುವ ಬಾಡಿಗೆ ವಿವರಗಳನ್ನು http://bcw.karnataka.gov.in/info-4/LA-LC-Answer /en ರಲ್ಲಿ ನೀಡಲಾಗಿದೆ. |
| ಇ) | ಈ ಎಲ್ಲಾ ಹಾಸ್ಟೆಲ್‌ಗಳಿಗೆ ಎಷ್ಟು ವರ್ಷಗಳಿಂದ ಬಾಡಿಗೆಯನ್ನು ಪಾವತಿ ಮಾಡಲಾಗುತ್ತಿದೆ; (ವಿವರ ನೀಡುವುದು) | |
| ಈ) | ಪದೇ ಪದೇ ಈ ಹಾಸ್ಟೆಲ್‌ಗಳನ್ನು ಒಂದು ಬಾಡಿಗೆ ಕಟ್ಟಡದಿಂದ ಮತ್ತೊಂದು ಬಾಡಿಗೆ ಕಟ್ಟಡಕ್ಕೆ ಬದಲಾವಣೆ ಮಾಡುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಮತ್ತು ವಿದ್ಯಾರ್ಥಿಗಳಿಗೆ ಕನಿಷ್ಟ ಸೌಲಭ್ಯಗಳಿಲ್ಲದಿರುವುದು ಸರ್ಕಾರದ | ಸಂಖ್ಯಾಬಲಕ್ಕೆ ಅನುಗುಣವಾಗಿ ಸ್ಥಳಾವಕಾಶ ಹಾಗೂ ಮೂಲಭೂತ ಸೌಕರ್ಯಗಳಿಲ್ಲದ ಕಟ್ಟಡಗಳಿದ್ದಲ್ಲಿ ಮಾತ್ರ ನಿಲಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ವಿದ್ಯಾರ್ಥಿನಿಲಯಕ್ಕೆ ಸಮರ್ಪಕವಾದ ರಸ್ತೆ ಸಂಪರ್ಕ, ಬಸ್ ಸೌಲಭ್ಯ ಹಾಗೂ ಬೀದಿ ದೀಪಗಳನ್ನು ಹೊಂದಿರುವ ಬಗ್ಗೆ ಖಚಿತಪಡಿಸಿಕೊಂಡು ಬಾಡಿಗೆ ಕಟ್ಟಡಗಳನ್ನು |

| | | |
|---|---|---|
| | ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇಲ್ಲಿಯವರೆಗೆ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಬೇರೊಂದು ಬಾಡಿಗೆ ಕಟ್ಟಡಕ್ಕೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ. |
| ಉ) | ಜಿಲ್ಲಾ ತಾಲ್ಲೂಕು ಮತ್ತು ಹೋಬಳಿ ಹಾಗೂ ಗ್ರಾಮ ಪಂಚಾಯಿತಿ ಕೇಂದ್ರಗಳಲ್ಲಿ ಸರ್ಕಾರದ ಜಾಗವಿದ್ದರೂ ಸಹ ಇದುವರೆವಿಗೂ ಈ ಹಾಸ್ಟೆಲ್‌ಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸದಿರಲು ಕಾರಣವೇನು; ಇನ್ನು ಮುಂದಾದರೂ ಸರ್ಕಾರಿ ಹಾಸ್ಟೆಲ್‌ಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರವು ಕ್ರಮ ತೆಗೆದುಕೊಳ್ಳುವುದೇ? (ಸರ್ಕಾರ ಸ್ಪಷ್ಟ ಉತ್ತರ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 2597 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈಗಾಗಲೇ 1641 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣವನ್ನು ಮಾಡಲಾಗಿರುತ್ತದೆ.<br><br>ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 724 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣವನ್ನು ನಿವೇಶನ ಲಭ್ಯತೆಯನುಸಾರ ಮತ್ತು ಹಾಸ್ಟೆಲ್ ಕಟ್ಟಡಗಳ ನಿರ್ಮಾಣ ಕಾರ್ಯಕ್ರಮದಡಿ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಹಂತ ಹಂತವಾಗಿ ಕೈಗೊಳ್ಳಲಾಗುತ್ತಿದೆ. 2024-25ನೇ ಸಾಲಿನಲ್ಲಿ ಆಯವ್ಯಯ ಘೋಷಣೆಯಂತೆ 30 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣವನ್ನು ಕೈಗೊಳ್ಳಲಾಗಿರುತ್ತದೆ.<br><br>ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ 34 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣವನ್ನು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಸಹಭಾಗಿತ್ವದೊಂದಿಗೆ ಕೈಗೊಳ್ಳಲು ಕ್ರಮವಹಿಸಲಾಗಿರುತ್ತದೆ. |

**ಸಂಖ್ಯೆ**:ಹಿಂವಕ 968 ಬಿಂಎಂಎಸ್ 2024

**( ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು
ಸಂಸ್ಕೃತಿ ಸಚಿವರು